ದಿನಾಂಕಃ **06-08-2024** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಮತಿ ಎಫ್ .ಕೆ. ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ 2017-18 ನೇ ಸಾಲಿನ ಸರ್ವೆನಂ. 33 ರ ಪಹಣಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2.ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ 2024-25 ನೇ ಸಾಲಿನ ಸರ್ವೆನಂ. 33 ರ ಪಹಣಿಯನ್ನು ನಿಪಿ.2 ಎಂದು ಗುರುತಿಸಲಾಯಿತು.
3. ಮ್ಯೂಟೇಷನ್ ಎಕ್ಸ್ಟ್ರಾಕ್ಟ್ ಸಂಖ್ಯೆ 1/-2004-05 ನ್ನು ನಿಪಿ.3 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಅಧಿಕ ಸಿವಿಲ್ ನ್ಯಾಯಾಧೀಶರು
ತಿಪಟೂರು.